ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ7[2]ಪ್ರಾಶಿಅ.ಹೊ.ಶಾ.ನೋಂ.104/2019-20 ದಿನಾಂಕ:27ನೇ ಫೆಬ್ರವರಿ 2020

**: : ಸುತ್ತೋಲೆ : :**

ವಿಷಯ: 2020-21ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನರಹಿತ ಪೂರ್ವಪ್ರಾಥಮಿಕ/ ಪ್ರಾಥಮಿಕ/ಪ್ರೌಢಶಾಲೆಗಳನ್ನು ಪ್ರಾರಂಭಿಸಲು ನೋಂದಣಿ ನೀಡುವ ಕುರಿತು.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:25-11-2019 ಮತ್ತು ದಿನಾಂಕ:21-1-2020 ಮತ್ತು ದಿನಾಂಕ:29-1-2020

*****

2020-21ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನರಹಿತ ಪೂರ್ವ ಪ್ರಾಥಮಿಕ/ಪ್ರಾಥಮಿಕ ಕಿರಿಯ, ಹಿರಿಯ ಹಾಗೂ ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಸಂಸ್ಥೆಗಳು ಆನ್‌ಲೈನ್ ಮುಖಾಂತರ **ದಿ:23-12-2019 ರಿಂದ ದಿನಾಂಕ:23-1-2020 ರವರೆಗೆ ಮತ್ತು ಎರಡನೆಯ ಬಾರಿಗೆ ಆಡಳಿತಾತ್ಮಕ ದೃಷ್ಟಿಯಿಂದ ದಿನಾಂಕ:15-2-2020 ರವರೆಗೆ ಇಲಾಖಾ ವೆಬ್‌ಸೈಟ್‌ನಲ್ಲಿ** [www.schooleducation.kar.nic.in] ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿತ್ತು. ಈ ಅವಧಿಯಲ್ಲಿ 1484 ಅರ್ಜಿಗಳು ಸ್ವೀಕೃತಿಯಾಗಿರುತ್ತವೆ.

ಆದರೆ ದಿನಾಂಕ:15-2-2020ರ ಕೊನೆಯ ದಿನಾಂಕದವರೆಗೆ ಅನೇಕ ಸಂಸ್ಥೆಗಳು ಹೊಸ ಶಾಲೆ ನೋಂದಣಿ ಅನುಮತಿಗಾಗಿ ಅರ್ಜಿ ಸಲ್ಲಿಸಲು **ಖಜಾನೆಗೆ ಕೆ-2** ಮುಖಾಂತರ ಹಣ ಸಂದಾಯ ಮಾಡಿ ಇಲಾಖೆಯ ತಂತ್ರಾಂಶದಲ್ಲಿ ದಾಖಲೆಗಳನ್ನು ಸಕಾಲದಲ್ಲಿ ಅಂತಿಮ ಹಂತದ ವರೆಗೂ ಪೂರ್ಣವಾಗಿ ಅಪ್‌ಲೋಡ್ ಮಾಡಲು ಸಾಧ್ಯವಾಗದ ಕಾರಣ ಈಗಾಗಲೇ ಖಜಾನೆ[ಕೆ2]ಯಲ್ಲಿ ಹಣ ಸಂದಾಯ ಮಾಡಿರುವುದರಿಂದ ಅಪೂರ್ಣ ಮಾಹಿತಿ ಮತ್ತು ದಾಖಲೆಗಳನ್ನು ಮಾತ್ರ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲು ಅವಕಾಶ ಮಾಡಿಕೊಡಲು ಮನವಿ ಸಲ್ಲಿಸಿರುತ್ತಾರೆ.

ತಂತ್ರಾಂಶದಲ್ಲಿ ಪುನ: ಅಫ್‌ಲೋಡ್ ಮಾಡಲು [ದಾಖಲಿಸಲು] ದಿನಾಂಕವನ್ನು ವಿಸ್ತರಿಸಬೇಕೆಂಬುದಾಗಿ ಆಡಳಿತ ಮಂಡಳಿಗಳು ಕೋರಿರುವ ಹಿನ್ನೆಲೆಯಲ್ಲಿ ಈಗಾಗಲೇ **ದಿನಾಂಕ:15-2-2020ರೊಳಗೆ ಕೆ-2 ಮುಖಾಂತರ ಹಣ ಪಾವತಿಸಿರುವ ಸಂಸ್ಥೆಗಳಿಗೆ ದಾಖಲೆಗಳನ್ನು ಅಫ್‌ಲೋಡ್ ಮಾಡಲು ದಿನಾಂಕ:10-3-2020ರವರೆಗೆ ಅವಕಾಶ ಕಲ್ಪಿಸಲಾಗಿದೆ.** ಈಗಾಗಲೇ ಎರಡು ಬಾರಿ ದಿನಾಂಕವನ್ನು ವಿಸ್ತರಿಸಿರುವುದರಿಂದ ಪುನ: ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ.

| ಕ್ರ.ಸಂ | ವಿಷಯ | ದಿನಾಂಕ | ವರೆಗೆ |
|---|---|---|---|
| 1. | ದಿನಾಂಕ:15-2-2020ರೊಳಗೆ ಖಜಾನೆ-2ನಲ್ಲಿ ಹಣವನ್ನು ಪಾವತಿಸಿರುವ ನೋಂದಾಯಿತ ಸಂಸ್ಥೆಗಳು ತಂತ್ರಾಂಶದಲ್ಲಿ ದಾಖಲೆಗಳನ್ನು ದಾಖಲಿಸಿ ಅಫ್‌ಲೋಡ್ ಮಾಡಲು ಕೊನೆಯ ದಿನಾಂಕ | 15-2-2020 | 10-3-2020 |
| 2 | 1] ಕ್ಷೇತ್ರ ಶಿಕ್ಷಣಾಧಿಕಾರಿಗಳು ಪೂರ್ವ ಪ್ರಾಥಮಿಕ ಶಾಲೆಗಳಿಗೆ ಅನುಮತಿ ಕೋರಿ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಪರಿಶೀಲಿಸಿ ವಿಳಂಬ ಮಾಡದೇ ಅರ್ಜಿಯನ್ನು ನಿಯಮಾನುಸಾರ ಇತ್ಯರ್ಥಪಡಿಸುವುದು.<br>2] ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವಲಯದಲ್ಲಿ ಆನ್‌ಲೈನ್ ಮುಖಾಂತರ ಸಲ್ಲಿಸಿರುವ ಹೊಸ ಶಾಲಾ ಅರ್ಜಿಗಳನ್ನು ಪರಿಶೀಲಿಸಿ ಹೊಸದಾಗಿ ಅಭಿವೃದ್ಧಿಪಡಿಸಿರುವ ತಂತ್ರಾಂಶದಲ್ಲಿ ಸ್ಪಷ್ಟ ಅಭಿಪ್ರಾಯದೊಂದಿಗೆ ಜಿಲ್ಲಾ ಉಪನಿರ್ದೇಶಕರಿಗೆ ಅರ್ಜಿಯನ್ನು ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸುವುದು. | 29-02-2020 | 15-03-2020 |
| 3 | 1] ಉಪನಿರ್ದೇಶಕರು[ಆಡಳಿತ], ಹೊಸ ಶಾಲಾ ಅರ್ಜಿಗಳಲ್ಲಿ ತಮ್ಮ ಹಂತದಲ್ಲೇ ನೋಂದಣಿ ನೀಡುವಂತಹ [1ರಿಂದ5, 6 ರಿಂದ8, 1ರಿಂದ8] ರವರೆಗಿನ ಶಾಲೆಗಳ ನೋಂದಣಿಯನ್ನು ತ್ರಿ ಸದಸ್ಯ ಸಮಿತಿಯ ವರದಿಯನ್ನು ಪಡೆದು ಅರ್ಜಿಗಳನ್ನು ವಿಳಂಬ ಮಾಡದೇ ನಿಯಮಾನುಸಾರ ಇತ್ಯರ್ಥಪಡಿಸುವುದು.<br>2] ಉಪನಿರ್ದೇಶಕರು ತಮ್ಮ ಜಿಲ್ಲೆಯಲ್ಲಿ 1 ರಿಂದ 10 ಮತ್ತು 9 ರಿಂದ 10 ರವರೆಗಿನ ಶಾಲೆಗಳನ್ನು ಪ್ರಾರಂಭಿಸಲು ಸಲ್ಲಿಸಿರುವ ಅರ್ಜಿಗಳನ್ನು ಪರಿಶೀಲಿಸಿ ತ್ರಿ ಸದಸ್ಯರ ಸಮಿತಿಯ ವರದಿಯೊಂದಿಗೆ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಳಂಬ ಮಾಡದೇ ಇತ್ಯರ್ಥಪಡಿಸಲು ಆಯುಕ್ತಾಲಯಕ್ಕೆ ಸಲ್ಲಿಸುವುದು. | 11-03-2020 | 31-03-2020 |

| | | | |
|---|---|---|---|
| 4 | ಉಪನಿರ್ದೇಶಕರಿಂದ ಆನ್‌ಲೈನ್ ಮುಖಾಂತರ ಸ್ವೀಕೃತಿಯಾದ ಅರ್ಜಿಗಳನ್ನು ನಿರ್ದೇಶಕರು [ಪ್ರೌಢಶಿಕ್ಷಣ] ರವರು ಪರಿಶೀಲಿಸಿ ಮಾನ್ಯ ಆಯುಕ್ತರ ಅನುಮೋದನೆ ಪಡೆದು ನಿಯಮಾನುಸಾರ ಇತ್ಯರ್ಥಪಡಿಸುವುದು. | 26-03-2020 | 10-04-2020 |

[ಡಾ:ಕೆ.ಜಿ.ಜಗದೀಶ ಭಾ.ಆ.ಸೇ]
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು[ಆಡಳಿತ] ರವರಿಗೆ
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

**ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ ಇವರಿಗೆ ಕಳುಹಿಸುತ್ತಾ ನಿಯಮಾನುಸಾರ ಕ್ರಮವಹಿಸಲು ತಿಳಿಸಿದೆ.
2. ಕಾರ್ಯಕ್ರಮಾಧಿಕಾರಿಗಳು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು.
3. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡುವುದು.
4. ಪ್ರೋಗ್ರಾಮರ್, ಸಾಫ್ಟ್‌ವೇರ್ ಡೆವಲಪ್ ಮೆಂಟ್ ಸೆಂಟರ್, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ಈ ಬಗ್ಗೆ ಅಗತ್ಯ ಕ್ರಮವಹಿಸುವುದು. ಹಾಗೂ ಹಣ ಪಾವತಿ ಮಾಡಿರುವ ಸಂಸ್ಥೆಗಳಿಗೆ ಮಾಹಿತಿ ನೀಡುವುದು.
5. ಕಛೇರಿ ಪ್ರತಿ.